ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ರಾಯಚೂರು ನಗರದ ಒಳಚರಂಡಿ ಕಾಮಗಾರಿ ಪೂರ್ಣಗೊಳಿಸುವ ಕುರಿತು

ಶ್ರೀ ಎನ್. ಎಸ್. ಬೋಸ್‌ರಾಜು(ವಿಧಾನ ಸಭೆಯಿಂದ ಚುನಾಯಿತರಾದವರು):-

490 (778) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ನಗರದ ಒಳಚರಂಡಿ ನಿರ್ಮಾಣದ ಕಾಮಗಾರಿಯನ್ನು ಎಷ್ಟು ಭಾಗ ಪೂರ್ಣಗೊಳಿಸಲಾಗಿದೆ; ಇದಕ್ಕೆ ಖರ್ಚಾಗಿರುವ ಅನುದಾನ ಎಷ್ಟು; ಬಾಕಿ ಉಳಿದ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಇದಕ್ಕೆ ಬೇಕಾಗಿರುವ ಅನುದಾನ ಎಷ್ಟು;

(ಆ) ರಾಯಚೂರು ನಗರದಲ್ಲಿರುವ ವಿವಿಧ ಬಡಾವಣೆಗಳ ಉದ್ಯಾನವನ ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ರಾಯಚೂರು ನಗರದಲ್ಲಿರುವ ಮಾವಿನಕೆರೆ ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಸದರಿ ಉದ್ಯಾನವನ ಅಭಿವೃದ್ಧಿಗೆ ಖರ್ಚಾಗಿರುವ ಅನುದಾನ ಎಷ್ಟು?